# ಗಣರಾಜ್ಯೋತ್ಸವ ಭಾಷಣ ಕನ್ನಡ

ನನ್ನೆಲ್ಲಾ ನೆಚ್ಚಿನ ಶಿಕ್ಷಕರೇ, ಹಿರಿಯರೆ ಹಾಗೂ ಸಹಪಾಠಿಗಳೇ ಎಲ್ಲರಿಗೂ ನಮಸ್ಕಾರ. ಇಂದು ನಮಗೆಲ್ಲರಿಗೂ ತಿಳಿದಂತೆ ನಾವು ಭಾರತದ ಪ್ರಮುಖ ಐತಿಹಾಸಿಕ ದಿನವಾದ **74**ನೇ ಗಣರಾಜ್ಯೋತ್ಸವ ದಿನವನ್ನು ಆಚರಿಸಲು ಸೇರಿದ್ದೇವೆ. ಇಂದು ನಮ್ಮ ದೇಶದ ಬಗ್ಗೆ ಮತ್ತು ಸಂವಿಧಾನ ಜಾರಿಗೆ ಬಂದ ದಿನದ ಬಗ್ಗೆ ಸವಿನೆನಪು ಮಾಡಿಕೊಳ್ಳಲು ತುಂಬಾ ಕುತೂಹಲವಾಗುತ್ತಿದ್ದು, ನನಗೆ ಈ ಅವಕಾಶ ಸಿಕ್ಕಿರುವುದು ಖುಷಿ ತಂದಿದೆ.

ಇಂದು ಭಾರತದ ಸಂವಿಧಾನ ದಿನ : ಇತಿಹಾಸ, ಪ್ರಾಮುಖ್ಯತೆ ಹಾಗೂ ವಿದ್ಯಾರ್ಥಿಗಳ ಭಾಷಣಕ್ಕೆ ಟಿಪ್ಸ್ ಇಲ್ಲಿದೆ..

ಸ್ನೇಹಿತರೇ ಪ್ರತಿವರ್ಷ ಜನವರಿ **26** ರಂದು ಗಣರಾಜ್ಯ ದಿನವನ್ನಾಗಿ ಭಾರತದಲ್ಲಿ ಆಚರಣೆ ಮಾಡುತ್ತೇವೆ. ಈ ಸುಸಂದರ್ಭದಲ್ಲಿ ನಾನು ಭಾರತ ದೇಶದ ಒಬ್ಬ ಪ್ರಜೆಯಾಗಿರುವುದಕ್ಕೆ ಹೆಮ್ಮೆ ಪಡುತ್ತೇನೆ. ನಾವಿಂದು ಇಲ್ಲಿ ಸ್ವತಂತ್ರವಾಗಿ, ಶಿಸ್ತಿನಿಂದ ಇದ್ದೇವೇ ಎಂದರೆ ಅದಕ್ಕೆ ಮೂಲ ಕಾರಣ ನಮ್ಮ ಸಂವಿಧಾನ.

ನಾವು ಸಮಾನತೆಯಿಂದ, ಎಲ್ಲ ವರ್ಗದ ಜನರು ಸಮಾನವಾಗಿ ಶಿಕ್ಷಣ ಕಲಿಯುತ್ತಿರುವುದೇ ಸಂವಿಧಾನ ಜಾರಿಗೆ ಬಂದಿದ್ದರಿಂದ. ಭಾರತ ದೇಶದಲ್ಲಿ ಸಂವಿಧಾನ ಜಾರಿಗೆ ಬಂದಮೇಲೆಯೇ ಈ ದೇಶದ

ಪ್ರತಿಯೊಬ್ಬರಿಗೂ ಮೂಲಭೂತ ಹಕ್ಕುಗಳಾದ ಸಮಾನತೆ ಸ್ವತಂತ್ರ, ಧರ್ಮ, ಸಂಸ್ಕೃತಿ, ಶಿಕ್ಷಣ ಮತ್ತು ಇತರೆ ಹಕ್ಕುಗಳು ಸಿಕ್ಕಿರುವುದು.

ಸಂವಿಧಾನದಲ್ಲಿ ಮೂಲಭೂತ ಹಕ್ಕುಗಳಂತೆಯೇ, ನಾವುಗಳು ಈ ದೇಶದ ಪ್ರಜೆಗಳಾದ ಮೇಲೆ

ನಿರ್ವಹಿಸಬೇಕಾದ ಮೂಲಭೂತ ಕರ್ತವ್ಯಗಳು ಸಹ ಇವೆ. ದೇಶದ ಸಂಪನ್ಮೂಲಗಳನ್ನು ಕಾಪಾಡುವುದು

ರಾಷ್ಟ್ರಗೀತೆ, ರಾಷ್ಟ್ರಧ್ವಜವನ್ನು ಗೌರವಿಸುವುದು, ಸರ್ಕಾರದ ನಿಯಮಗಳು, ಸಂವಿಧಾನದ ಆದರ್ಶಗಳನ್ನು ಪಾಲಿಸುವುದು ಹಾಗೂ ಇತರೆ ಜವಬ್ದಾರಿಗಳು ನಮ್ಮ ಮೇಲೆ ಇವೆ.

ಸ್ವಾತಂತ್ರ್ಯ ದಿನಾಚರಣೆ ಹಾಗೂ ಗಣರಾಜ್ಯೋತ್ಸವದ ಧ್ವಜಾರೋಹಣಕ್ಕೆ ಇರುವ ವ್ಯತ್ಯಾಸಗಳೇನು ಗೊತ್ತೆ?

ನಾವೆಲ್ಲರೂ ಸ್ವತಂತ್ರರಾಗಿ ಜೀವಿಸಲು, ಶಿಕ್ಷಣ ಪಡೆಯಲು ಅವಕಾಶ ನೀಡಿರುವ ಇಂತಹ ಸಂವಿಧಾನವನ್ನು ದೇಶದಲ್ಲಿ ಜಾರಿಗೆ ತರಲು ಶ್ರಮಿಸಿದ ಎಲ್ಲರಿಗೂ ಇಂದು ನಾವೆಲ್ಲರೂ ತಲೆ ಭಾಗಿಸಿ ನಮಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ.

ಸ್ವಾತಂತ್ರ್ಯ, ಸಮಾನತೆ, ಸಹೋದರತ್ವ, ಏಕತೆ, ಭ್ರಾತೃತ್ವ ಸ್ವಾತಂತ್ರ್ಯ ಭಾರತದ ಸಂವಿಧಾನದಲ್ಲಿ ಇರುವ ಐದು ಪ್ರಮುಖ ಮೌಲ್ಯಗಳಾಗಿವೆ.

ಆಗಸ್ಟ್ 15, 1947 ರಲ್ಲಿ ಬ್ರಿಟಿಷರಿಂದ ತಾತ್ವಿಕವಾಗಿ ಸ್ವಾತಂತ್ರ್ಯವನ್ನು ಪಡೆದುಕೊಂಡ ದಿನವಾದರೆ

ಜನವರಿ 26, 1950 ಭಾರತ ತನ್ನ ಸಂವಿಧಾನವನ್ನು ಜಾರಿಗೊಳಿಸಿದ ದಿನವಾಗಿದೆ. ರಾಜ ಪ್ರಭುತ್ವವನ್ನು ತ್ಯಜಿಸಿ ಪ್ರಜಾಪ್ರಭುತ್ವದಲ್ಲಿ ತನ್ನ ನಿಜ ಅಸ್ಥಿತ್ವವನ್ನು ಸ್ಥಾಪಿಸಿದ ದಿನವಾಗಿದೆ. ಈ ಕಾರಣಕ್ಕಾಗಿ ಗಣರಾಜ್ಯೋತ್ಸವ ಭಾರತೀಯರ ಪಾಲಿಗೆ ಅತ್ಯಂತ ಮಹತ್ವದ ದಿನವಾಗಿದೆ.

ಭಾರತ ತನ್ನದೇ ಆದ ಸಂವಿಧಾನವನ್ನು ಜಾರಿಗೆ ತರುತ್ತಿದ್ದಂತಯೇ ಪ್ರಜಾಪ್ರಭುತ್ವ ಗಣರಾಜ್ಯವಾಗಿ

ಬದಲಾಯಿತು. ಭಾರತಕ್ಕೆ ಉತ್ತಮ ಮತ್ತು ಬಲಿಷ್ಠ ರಾಷ್ಟ್ರ ನಿರ್ಮಾಣಕ್ಕೆ ಅಗತ್ಯ ಸಂವಿಧಾನದ ರಚನೆಗೆ

ರಚನಾ ಸಮಿತಿಯನ್ನು ನೇಮಿಸಲಾಗಿತ್ತು.1947 ರ ಆಗಸ್ಟ್ 29 ರಂದು ಡಾ. ಬಿ.ಆರ್. ಅಂಬೇಡ್ಕರ್ ಅವರು ಭಾರತದ ಸಂವಿಧಾನದ ಕರಡು ಸಮಿತಿಯ ಅಧ್ಯಕ್ಷರಾದರು.

ನವೆಂಬರ್ 26,1949 ರಲ್ಲಿ ಭಾರತದ ಸಂವಿಧಾನವನ್ನು ಅಂಗೀಕರಿಸಲಾಯಿತು. ಪ್ರಜಾಪ್ರಭುತ್ವ

ಸರ್ಕಾರ ವ್ಯವಸ್ಥೆಯೊಂದಿಗೆ ಜನವರಿ 26, 1950 ರಂದು ಸಂವಿಧಾನವನ್ನು ಭಾರತದಲ್ಲಿ

ಜಾರಿಗೊಳಿಸಲಾಯಿತು. ಈ ಸಂವಿಧಾನವನ್ನು ರಷ್ಯಾ, ಬ್ರಿಟನ್, ಅಮೇರಿಕ, ಇತರೆ ಹಲವು ದೇಶಗಳ ಸಂವಿಧಾನದ ಪ್ರಮುಖ ಅಂಶಗಳ ಸಂಯೋಜನೆಯಾಗಿದೆ.

ಭಾರತದ ಸಂವಿಧಾನ ಪ್ರತಿಯೊಂದರಲ್ಲೂ ವಿಶೇಷತೆಯನ್ನು ಹೊಂದಿದೆ. ನಮ್ಮ ಸಂವಿಧಾನವನ್ನು

ಹಸ್ತಾಕ್ಷರದಲ್ಲಿ ರಚನೆಯಾಗಿದ್ದು, ಹಸ್ತಾಕ್ಷರದಲ್ಲಿ ರಚನೆಯಾದ ವಿಶ್ವದ ಮೊದಲ ಸಂವಿಧಾನ. ಹಿಂದಿ ಮತ್ತು ಇಂಗ್ಲಿಷ್ ಭಾಷೆಗಳಲ್ಲಿ ಸಂವಿಧಾನವನ್ನು ರಚನೆ ಮಾಡಲಾಗಿದೆ. ಇಂತಹ ಸಂವಿಧಾನವನ್ನು ನೀಡಿದ

**Download All Type PDF : https://pdfseva.com/**

ಡಾ. ಬಾಬಾ ಸಾಹೇಬ್ ಭೀಮರಾವ್ ಅಂಬೇಡ್ಕರ್ ಅವರನ್ನು ಭಾರತೀಯ ಸಂವಿಧಾನದ ಪಿತಾಮಹ ಎಂದು ಕರೆಯಲಾಗುತ್ತದೆ.

ಈ ಶುಭದಿನ ಮತ್ತು ಐತಿಹಾಸಿಕ ದಿನದಂದು ನಮ್ಮ ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಮತ್ತು

ಸಂವಿಧಾನವನ್ನು ಜಾರಿಗೆ ತರಲು ಶ್ರಮಿಸಿದ ಎಲ್ಲಾ ಮಹಾನ್ ವ್ಯಕ್ತಿಗಳಿಗೆ ಗೌರವವನ್ನು ಸಲ್ಲಿಸುತ್ತ,

ನನಗೆ ಮಾತನಾಡಲು ಅವಕಾಶ ಮಾಡಿಕೊಟ್ಟ ಎಲ್ಲರಿಗೂ ವಂದಿಸುತ್ತಾ, ನನ್ನ ಎರಡು ಮಾತುಗಳನ್ನು ಮುಗಿಸುತ್ತೇನೆ.

ಜೈ ಹಿಂದ್ ...

**By : www.PDFSeva.com**

PDFSeva.com